# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 69 ಮನೋರಾಯನಪಾಳ್ಯ**

ಸಂಖ್ಯೆ: ಸ.ಅ/ವಾ-69/ಪಿ.ಆರ್/05/2022-23 ದಿನಾಂಕ:- 17-12-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:- 17-12-2022 ರಂದು ವಾರ್ಡ್ ನಂ:69 ಮನೋರಾಯನಪಾಳ್ಯ ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಅಶೋಕ್ ಹಿಂದಾ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಸೋಮಶೇಖರ್ ನಿಟ್ಟೂರೆ | ಸಹಾಯಕ ಅಭಿಯಂತರರು ವಾರ್ಡ್ ನಂ: 69 |
| 3. | ಶ್ರೀಮತಿ ಉಷಾರಾಣಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4. | ಶ್ರೀ. ಕೇತನ್ | ಅಸೆಸರ್, ಕಂದಾಯ ಇಲಾಖೆ |
| 5. | ಶ್ರೀ. ಯಲ್ಲಪ್ಪ | ಬಿ.ಬಿ.ಎಂ.ಪಿ ಮಾರ್ಷಲ್ |
| 6. | ಶ್ರೀ. ಮುಕೇಶ್ | ಸಾರ್ವಜನಿಕರು |
| 7. | ಶ್ರೀ. ನರಸಿಂಹ | ಸಾರ್ವಜನಿಕರು |
| 8. | ಶ್ರೀ. ನಾಸೀರ್ ಹುಸೇನ್ | ಸಾರ್ವಜನಿಕರು |
| 9. | ಶ್ರೀ. ದಿಲೀಪ್ ಕುಮಾರ್ | ಸಾರ್ವಜನಿಕರು |
| 10. | ಶ್ರೀ. ಪುನೀತ್ ಕುಮಾರ್ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ಅಶೋಕ್ ಹಿಂದಾ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ.ಸೊಮಶೇಖರ್ ನಿಟ್ಟೂರೆ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-69 ರವರು ಹಿಂದಿನ ಸಭೆಯಲ್ಲಿ ನಡೆದಂತಹ ವಿಷಯಗಳ ಹಾಗೂ ದೂರುಗಳ ಕುರಿತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಲಾಯಿತು.

**ಬೀದಿ ದೀಪ:-**

1. ಭುವನೇಶ್ವರಿ ನಗರದಲ್ಲಿ ಕೆಲವು ಬೀದಿ ದೀಪಗಳು ಕೆಟ್ಟು ಹೋಗಿದ್ದು, ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರು ಕೆಟ್ಟುಹೋಗಿದ್ದ ಬೀದಿ ದೀಪಗಳನ್ನು ಈಗಾಗಲೇ ಸರಿಪಡಿಸಿರುತ್ತಾರೆ/

**ಕಾಮಗಾರಿ ಇಲಾಖೆ:**

1. ಮನೋರಾಯನಪಾಳ್ಯ ಬಡಾವಣೆಯಲ್ಲಿ ರಸ್ತೆಯ ಮೇಲೆ ಹರಿಯುವ ನೀರನ್ನು ರಸ್ತೆ ಪಕ್ಕದ ಚರಂಡಿಗಳಿಗೆ ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಲಾಗಿದೆ.

**ಆರೋಗ್ಯ ಇಲಾಖೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್ ಸ್ಥಳಗಳಲ್ಲಿ ಕಸವನ್ನು ಸುರಿಯುತ್ತಿರುವವರ ವಿರುದ್ಧ ಮಾರ್ಷಲ್‌ಗಳು ದಂಡವನ್ನು ವಿಧಿಸುತ್ತಿರುತ್ತಾರೆ.

**ದಿನಾಂಕ:-17-12-2022 ರಂದು ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು**

**ಬೀದಿ ದೀಪ:-**

1. ಬಾಬುರೆಡ್ಡಿ ಬಡಾವಣೆಯಲ್ಲಿ ಕೆಲವು ಬೀದಿ ದೀಪಗಳು ಸರಿಯಾಗಿ ಉರಿಯುತ್ತಿರುವುದಿಲ್ಲವೆಂದು ಸಾರ್ವಜನಿಕರು ದೂರಿದ್ದು, ಅವುಗಳನ್ನು ಸರಿಪಡುವಂತೆ ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರಿಗೆ ಸೂಚಿಸಲಾಯಿತು.

**ಕಾಮಗಾರಿ ಇಲಾಖೆ:**

1. ಭುವನೇಶ್ವರಿ ನಗರ ರಸ್ತೆಯ ಮೇಲೆ ಹರಿಯುವ ನೀರನ್ನು ರಸ್ತೆ ಪಕ್ಕದ ಚರಂಡಿಗಳಿಗೆ ಸರಾಗವಾಗಿ ಹರಿಯುವಂತೆ ಕ್ರಮಕೈಗೊಳ್ಳಲು ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

**ಆರೋಗ್ಯ ಇಲಾಖೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೇ ನಿರೋಧಕ ಔಷಧಿಯನ್ನು ಸಿಂಪಡಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 69 ಮನೋರಾಯನಪಾಳ್ಯ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 69 ಮನೋರಾಯನಪಾಳ್ಯ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
5. ಕಛೇರಿ ಕಡತಕ್ಕೆ.